# ಭಾರತಕ್ಕೆ ಯುರೋಪಿಯನ್ನರ ಆಗಮನ ಸಮಾಜ ವಿಜ್ಞಾನ 10ನೇ ತರಗತಿ ಭಾಗ-1 ಅಧ್ಯಾಯ 1

**ಸಮಾಜ ವಿಜ್ಞಾನ 10ನೇ ತರಗತಿ ಭಾಗ-1**

**ಅಧ್ಯಾಯ 1**

## ಭಾರತಕ್ಕೆ ಯುರೋಪಿಯನ್ನರ ಆಗಮನ

I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ಭರ್ತಿಮಾಡಿ.
೧. 1453ರಲ್ಲಿ ಆಟೋಮಾನ್ ಟರ್ಕರು ಕಾನ್ಸ್ಟಾಂಟಿನೋಪಲ್ ನಗರವನ್ನು ವಶಪಡಿಸಿಕೊಂಡರು.
೨. ಭಾರತ ಹಾಗೂ ಯುರೋಪ್ ನಡುವೆ ಹೊಸ ಜಲಮಾರ್ಗವನ್ನು ಕಂಡು ಹಿಡಿದವನು ವಾಸ್ಕೋಡಗಾಮ.
೩. 1741ರಲ್ಲಿ ಡಚ್ಚರು ತಿರುವಾಂಕೂರಿನ ಮೇಲೆ ಯುದ್ಧ ಸಾರಿದರು.
೪. ಭಾರತದಲ್ಲಿದ್ದ ಫ್ರೆಂಚರ ರಾಜಧಾನಿ ಪಾಂಡಿಚೆರಿ .
೫. 1757ರಲ್ಲಿ ರಾಬರ್ಟ್ ಕ್ಲೈವ್ ಮತ್ತು ಸಿರಾಜ್-ಉದ್-ದೌಲನ ನಡುವೆ ನಡೆದ ಕದನ ಪ್ಲಾಸಿ ಕದನ. .
೬. ಈಸ್ಟ್ ಇಂಡಿಯಾ ಕಂಪನಿಗೆ ಬಂಗಾಳದ 'ದಿವಾನಿ' ಹಕ್ಕನ್ನು ಎರಡನೇ ಷಾ ಆಲಂ ನೀಡಿದನು.
೭. ಬಂಗಾಳದಲ್ಲಿ 'ದ್ವಿ ಪ್ರಭುತ್ವ'ವನ್ನು ಜಾರಿಗೆ ತಂದವನು ರಾಬರ್ಟ್ ಕ್ಲೈವ್_ .

II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.

೮. ಮಧ್ಯಕಾಲದಲ್ಲಿ ಭಾರತ ಮತ್ತು ಯುರೋಪ್ ನಡುವೆ ವ್ಯಾಪಾರ ಹೇಗೆ ನಡೆಯುತ್ತಿತ್ತು?

ಪ್ರಾಚೀನ ಕಾಲದಂತೆ ಮಧ್ಯಕಾಲದಲ್ಲಿಯೂ ಯುರೋಪ್, ಭಾರತದ ನಡುವೆ ವ್ಯಾಪಾರ

ಮುಂದುವರೆಯಿತು. ಭಾರತದ ಸರಕುಗಳನ್ನು ಅರಬ್ ವರ್ತಕರು ಪೂರ್ವ ರೋಮನ್ ಸಾಮ್ರಾಜ್ಯದ ರಾಜಧಾನಿಯಾದ ಕಾನ್‌ಸ್ಟಾಂಟಿನೋಪಲ್ ನಗರಕ್ಕೆ ತಲುಪಿಸುತ್ತಿದ್ದರು. ಅಲ್ಲಿಂದ ಇಟಲಿಯ (ರೋಮನ್ ಸಾಮ್ರಾಜ್ಯದ ಭಾಗ) ವರ್ತಕರು ಅವುಗಳನ್ನು ಕೊಂಡು ಯುರೋಪಿನ ದೇಶಗಳಲ್ಲಿ ಮಾರುತ್ತಿದ್ದರು. ಭಾರತ ದೇಶದ ವ್ಯಾಪಾರದ ಮೇಲೆ ಅರಬ್ಬರು ಏಕಸ್ವಾಮ್ಯ ಸಾಧಿಸಿದ್ದರೆ, ಯುರೋಪಿನ ದೇಶಗಳ ವ್ಯಾಪಾರದ ಮೇಲೆ ಇಟಲಿಯ ವರ್ತಕರು ಏಕಸ್ವಾಮ್ಯ ಸಾಧಿಸಿದ್ದರು. ಭಾರತದ ಸರಕುಗಳು ಇಟಲಿಯ ವರ್ತಕರಿಗೆ ಒಳ್ಳೆಯ ಲಾಭವನ್ನು ತಂದು ಕೊಡುತ್ತಿದ್ದವು.

೯. ಭಾರತಕ್ಕೆ ಹೊಸ ಜಲಮಾರ್ಗ ಕಂಡು ಹಿಡಿಯಲು ಕಾರಣವಾದ ಅಂಶಗಳನ್ನು ಚರ್ಚಿಸಿರಿ.

ಏಷ್ಯಾ ಮತ್ತು ಯುರೋಪ್ ನಡುವಿನ ವ್ಯಾಪಾರ
ಮತ್ತು ವ್ಯವಹಾರಗಳು ಕಾನ್‌ಸ್ಟಾಂಟಿನೋಪಲ್ ನಗರದ ಮೂಲಕ ನಡೆಯುತ್ತಿತ್ತು. ೧೪೫೩ರಲ್ಲಿ ಆಟೋಮಾನ್ ಟರ್ಕರು ಕಾನ್‌ಸ್ಟಾಂಟಿನೋಪಲ್ ನಗರವನ್ನು ವಶಪಡಿಸಿಕೊಂಡರು. ಇದರಿಂದಾಗಿ ಆ ನಗರವನ್ನು ಸಂಧಿಸುವ ಎಲ್ಲಾ ವ್ಯಾಪಾರ ಮಾರ್ಗಗಳು ಟರ್ಕರ ನಿಯಂತ್ರಣಕ್ಕೆ ಹೋದವು. ಹೊಸದಾಗಿ ಸಿಕ್ಕ ಅವಕಾಶದಿಂದ ಟರ್ಕರು ಈ ಮಾರ್ಗದ ವ್ಯಾಪಾರದ ಮೇಲೆ ತೀವ್ರತರದ ತೆರಿಗೆಗಳನ್ನು ವಿಧಿಸತೊಡಗಿದರು. ಪರಿಣಾಮವಾಗಿ ವರ್ತಕರಿಗೆ ಈ ಮಾರ್ಗದ ವ್ಯಾಪಾರವು ಲಾಭದಾಯಕವಾಗಿ ಪರಿಣಮಿಸಲಿಲ್ಲ. ಇದೇ ವೇಳೆ ಇಟಲಿಯ ವರ್ತಕರ ಏಕಸ್ವಾಮ್ಯವನ್ನು ಮುರಿಯಲು ಸ್ಪೇನ್, ಪೋರ್ಚುಗಲ್ ಮೊದಲಾದ ಯುರೋಪಿನ ದೇಶಗಳ ರಾಜರು ಹೊಸಸಮುದ್ರ ಮಾರ್ಗಗಳನ್ನು ಹುಡುಕಲು ಸಾಹಸಿ ನಾವಿಕರನ್ನು ಪ್ರೋತ್ಸಾಹಿಸಲಾರಂಭಿಸಿದರು. ಇದಕ್ಕೆ ಪೂರಕವಾಗಿ ಹೊಸ ವೈಜ್ಞಾನಿಕ ಆವಿಷ್ಕಾರಗಳಾದ ದಿಕ್ಸೂಚಿ,ಆಸ್ಟ್ರೋಲೋಬ್ (ನಕ್ಷತ್ರ ಉನ್ನತಿ ಮಾಪನ), ಸಿಡಿಮದ್ದು, ಮೊದಲಾದವುಗಳು ನೆರವಿಗೆ ಬಂದವು.

೧೦. ಭಾರತಕ್ಕೆ ವ್ಯಾಪಾರಕ್ಕಾಗಿ ಬಂದ ಯುರೋಪಿಯನ್ನರುಗಳನ್ನು ಪಟ್ಟಿ ಮಾಡಿ.

ಯುರೋಪಿನ ಪೋರ್ಚುಗೀಸ್ ,ಡಚ್, ಇಂಗ್ಲಿಷ್

ಮತ್ತು ಫ್ರೆಂಚ್ ವ್ಯಾಪಾರಿ ಕಂಪನಿಗಳು ಭಾರತಕ್ಕೆ ಬಂದರು.

೧೧. ಮಾರ್ತಾಂಡ ವರ್ಮನು ಡಚ್ಚರನ್ನು ಹೇಗೆ ನಿಯಂತ್ರಿಸಿದನು?

1727 ರಿಂದ 1758 ರವರೆಗೆ ವೈನಾಡ್ ಸಂಸ್ಥಾನವನ್ನು ಆಳಿದ ಮಾರ್ತಾಂಡವರ್ಮನು ಪರಕೀಯ ಡಚ್ಚರಿಂದ ತನ್ನ ಸಂಸ್ಥಾನವನ್ನು ರಕ್ಷಿಸಿದ. ತನ್ನ ರಾಜಧಾನಿಯನ್ನು ಪದ್ಮನಾಭಪುರದಿಂದ ತಿರುವನಂತಪುರಕ್ಕೆ ಸ್ಥಳಾಂತರಿಸಿದ ಆತ ಕರಿಮೆಣಸಿನ ವ್ಯಾಪಾರದಲ್ಲಿ ಹಿಡಿತ ಸಾಧಿಸುತ್ತಿದ್ದ ಡಚ್ಚರನ್ನು ತಡೆಗಟ್ಟಿದ. ಕಾಯಂ ಕುಳಂ ಕೊಚ್ಚಿ, ಪುರಕ್ಕಾಡ್ ಮತ್ತು ವಡಕ್ಕುಂಕೂರ್ ಸಂಸ್ಥಾನಗಳ ಜೊತೆಗೂಡಿ ಡಚ್ ಸೇನೆಯು ತಿರುವಾಂಕೂರಿನ ಮೇಲೆ ಆಕ್ರಮಣ ಮಾಡಿದಾಗ ಮಾರ್ತಾಂಡ ವರ್ಮನ ಪಡೆ ಡಚ್ ಕೂಟವನ್ನು ಸೋಲಿಸಿ ನೆಡುಮಂಗಡ ಮತ್ತು ಕೊಟ್ಟಾರಕರ ವ್ಯಾಪಾರಿ ಕೇಂದ್ರಗಳನ್ನು ವಶಪಡಿಸಿಕೊಂಡಿತು.1741 ರಲ್ಲಿ ಡಚ್ ಈಸ್ಟ್ ಇಂಡಿಯಾ ಕಂಪನಿ ಕೊಟ್ಟಾರಕರ ಸಂಸ್ಥಾನವನ್ನು ಮುಂದಿಟ್ಟುಕೊಂಡು ತಿರುವಾಂಕೂರಿನ ಮೇಲೆ ಯುದ್ಧ ಸಾರಿತು. ಈ ಯುದ್ಧದಲ್ಲಿಯೂ ತಿರುವಾಂಕೂರು ಸೈನ್ಯ ಮೇಲುಗೈ ಸಾಧಿಸಿ ಡಚ್ಚರು ಅಪಾರ ಪ್ರಮಾಣದಲ್ಲಿ ನಷ್ಟವನ್ನು ಅನುಭವಿಸಬೇಕಾಯಿತು.ಅಂತಿಮವಾಗಿ 1753ರ ಆಗಸ್ಟ್ 15ರಂದು ನಡೆದ ಒಪ್ಪಂದದಲ್ಲಿ ಡಚ್ ಪಡೆಗಳು ತಮ್ಮ ಸಂಪೂರ್ಣ ಅಧಿಕಾರವನ್ನು ತಿರುವಾಂಕೂರಿಗೆ ಒಪ್ಪಿಸಿ ಶರಣಾದವು.

೧೨. ಎರಡನೇ ಕಾರ್ನಾಟಿಕ್ ಯುದ್ಧವನ್ನು ವಿವರಿಸಿ.

ಬದಲಾದ ಸನ್ನಿವೇಶದಲ್ಲಿ ಫ್ರೆಂಚರು

ಅಸಫ್‌ಜಾನ ಮತ್ತೊಬ್ಬ ಮಗನಾದ ಸಲಾಬತ್‌ಜಂಗನನ್ನು ಹೈದರಾಬಾದಿನ ನಿಜಾಮನಾಗಿ ಮಾಡಿದರು. ಅವನ ರಕ್ಷಣೆಗಾಗಿ ಆಸ್ಥಾನದಲ್ಲಿ ಫ್ರೆಂಚರು ತಮ್ಮ ಸೈನ್ಯ ಸಹಿತ 'ಬುಸ್ಸಿ' ಎಂಬ ಅಧಿಕಾರಿಯನ್ನು ನೇಮಿಸಿದ್ದರು. ಮತ್ತೊಂದು ಕಡೆ ಫ್ರೆಂಚರ ಬೆಂಬಲದಿಂದ ಚಂದಾಸಾಹೇಬನು ಕಾರ್ನಾಟಿಕ್‌ನ ನವಾಬನಾಗಿದ್ದನು.ಆದರೆ ಇಂಗ್ಲಿಷ್ ಈಸ್ಟ್ ಇಂಡಿಯಾ ಕಂಪನಿಯ ಅಧಿಕಾರಿ ರಾಬರ್ಟ್ ಕ್ಲೈವನು ಕರ್ನಾಟಿಕದ ರಾಜಧಾನಿ ಆರ್ಕಾಟಿನ ಮೇಲೆ ಆಕ್ರಮಣ ಮಾಡಿ ಫ್ರೆಂಚರು ಮತ್ತು ಚಂದಾಸಾಹೇಬನನ್ನು ಸೋಲಿಸಿದನು. ಅಂತಿಮವಾಗಿ ಈ ಯುದ್ಧದಲ್ಲಿ ಚಂದಾಸಾಹೇಬನನ್ನು

ಬಂಧಿಸಿ ಹತ್ಯೆ ಮಾಡಲಾಯಿತು. ಅವನ ಸ್ಥಾನಕ್ಕೆ ಬ್ರಿಟಿಷರು ಅನ್ವರುದ್ದೀನನ ಮಗನಾದ ಮಹಮ್ಮದ್ ಅಲಿಯನ್ನು ನವಾಬನಾಗಿ ನೇಮಕ ಮಾಡಿದರು. ಕೊನೆಗೆ ಎರಡನೆಯ ಕಾರ್ನಾಟಿಕ್ ಯುದ್ಧವು 'ಪಾಂಡಿಚೇರಿ ಒಪ್ಪಂದ'ದೊಂದಿಗೆ ಮುಕ್ತಾಯವಾಯಿತು. ಫ್ರೆಂಚರು ಡೂಪ್ಲೆಯನ್ನು ಹಿಂದಕ್ಕೆ ಕರೆಸಿಕೊಂಡರು. ಈ ಯುದ್ಧವು ಫ್ರೆಂಚರಿಗೆ ರಾಜಕೀಯ ಹಿನ್ನಡೆಯನ್ನು, ಬ್ರಿಟಿಷರಿಗೆ ಪ್ರತಿಷ್ಠೆಯನ್ನು ತಂದುಕೊಟ್ಟಿತು.

೧೩. ಪ್ಲಾಸಿ ಕದನಕ್ಕೆ ಕಾರಣ ಮತ್ತು ಪರಿಣಾಮಗಳನ್ನು ತಿಳಿಸಿ.

ಬಂಗಾಳದ ಯುವ ನವಾಬನಾದ ಸಿರಾಜ್-ಉದ್-ದೌಲನಿಗೂ ಮತ್ತು ಬ್ರಿಟಿಷರಿಗೂ 1757ರಲ್ಲಿ ಇತಿಹಾಸ ಪ್ರಸಿದ್ಧ ಪ್ಲಾಸಿ ಕದನ ನಡೆಯಿತು.

ಕಾರಣಗಳು :
೧. ದಸ್ತಕ್‌ಗಳ ದುರುಪಯೋಗ : ಕಂಪನಿಯ ವ್ಯಾಪಾರಕ್ಕಾಗಿ ನೀಡಿದ 'ದಸ್ತಕ್'ಗಳನ್ನು ಬ್ರಿಟಿಷ್ ನೌಕರರು ದುರುಪಯೋಗ ಪಡಿಸಿಕೊಳ್ಳುವ ಮೂಲಕ ರಾಜ್ಯದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡುತ್ತಿದ್ದದ್ದು ಸಿರಾಜನನ್ನು ಕೆರಳಿಸಿತು.
೨. ಅನುಮತಿ ಇಲ್ಲದೆ ಕೋಟೆಯ ದುರಸ್ಥಿ : ಪರಸ್ಪರ ಪ್ರತಿಸ್ಪರ್ಧಿಗಳಾದ ಬ್ರಿಟಿಷ್ ಮತ್ತು ಫ್ರೆಂಚರು ತಮ್ಮ ತಮ್ಮ ವ್ಯಾಪಾರಿ ಕೋಟೆಗಳನ್ನು ಶಸ್ತ್ರಾಸ್ತ್ರಗಳಿಂದ ಬಲಪಡಿಸಿಕೊಳ್ಳತೊಡಗಿದರು. ಅನುಮತಿ ಪಡೆಯದೆ ಕೋಟೆಯನ್ನು ದುರಸ್ಥಿ ಮಾಡಿಸಿದ್ದರಿಂದ ಹಾಗೂ ಫಿರಂಗಿಗಳನ್ನು ತೆಗೆದು ಹಾಕಲು ಸಿರಾಜ್ ಸೂಚಿಸಿದನಾದರೂ ಬ್ರಿಟಿಷರು ಪಾಲಿಸಲಿಲ್ಲ. ಇದರಿಂದ ಸಿರಾಜನು ಆಕ್ರೋಶಗೊಂಡನು.

೩. ಕಪ್ಪು ಕೋಣೆ ದುರಂತ : ಆಗ ಸಿರಾಜನು ಬ್ರಿಟಿಷರ ಫೋರ್ಟ್ ವಿಲಿಯಂ ಕೋಟೆಯನ್ನು ಸುಲಭವಾಗಿ ಗೆದ್ದು ಕೆಲವರನ್ನು ಸೆರೆಹಿಡಿದನು. ಸಿರಾಜನು ಆಕ್ರಮಣದಲ್ಲಿ ಸೆರೆ ಸಿಕ್ಕಿದ 146 ಬ್ರಿಟಿಷರನ್ನು ಚಿಕ್ಕ ಕೊಠಡಿಯೊಂದರಲ್ಲಿ ಬಂಧಿಸಿಟ್ಟನು. ಅವರಲ್ಲಿ 123 ಮಂದಿ ಅಸುನೀಗಿದರು ಮತ್ತು ೨೩ ಜನ ಬದುಕಿ ಉಳಿದರು. ಎಂಬುದಾಗಿತ್ತು. ಈ ಸುದ್ದಿ ಕೇಳಿ ರಾಬರ್ಟ್ ಕ್ಲೈವ್ ಉಗ್ರ ಕೋಪದಲ್ಲಿ ಬಲಿಷ್ಠ ಸೇನೆಯೊಂದಿಗೆ ಬಂಗಾಳಕ್ಕೆ ಬಂದನು.

ಪರಿಣಾಮಗಳು :

೧. ಈ ಯುದ್ಧವು ಭಾರತೀಯರಲ್ಲಿದ್ದ ಅನೈಕ್ಯತೆ, ಅಸಂಘಟನೆ ಮತ್ತು ಈ ಕಾಲದ ವ್ಯಾಪಾರಿ ವರ್ಗದಲ್ಲಿದ್ದ ಲೋಭಿತನವನ್ನು ಪ್ರದರ್ಶಿಸಿತು.
೨. ಮೀರ್ ಜಾಫರ್ ಬಂಗಾಳದ ನವಾಬನಾದನು.
೩. ಕಂಪನಿಯು ಬಂಗಾಳ ಪ್ರಾಂತ್ಯದಲ್ಲಿ ವ್ಯಾಪಾರ ನಡೆಸಲು ಅನಿರ್ಬಂಧಿತ ಹಕ್ಕನ್ನು ಪಡೆಯಿತು.
೪. ಸಿರಾಜನು ಕಲ್ಕತ್ತಾದ ಮೇಲೆ ನಡೆಸಿದ ಆಕ್ರಮಣಕ್ಕೆ ಯುದ್ಧ ಪರಿಹಾರವಾಗಿ ಮೀರ್ ಜಾಫರನು ಕಂಪನಿಗೆ ಹದಿನೇಳು ಕೋಟಿ ಎಪ್ಪತ್ತು ಲಕ್ಷ ರೂಪಾಯಿಗಳನ್ನು ನೀಡಿದನು.

## ೧೪. ಬಕ್ಸಾರ್ ಕದನದ ಪರಿಣಾಮಗಳಾವುವು?

ಪರಿಣಾಮಗಳು :
೧. ಈಸ್ಟ್ ಇಂಡಿಯಾ ಕಂಪನಿಗೆ ಬಂಗಾಳದ ಮೇಲಿನ 'ದಿವಾನಿ' ಹಕ್ಕನ್ನು ಎರಡನೇ ಷಾ ಆಲಂ ನೀಡಿದನು.
೨. ಷಾ ಆಲಂ ವಾರ್ಷಿಕ 26 ಲಕ್ಷ ರೂಪಾಯಿಗಳನ್ನು ಪಡೆದು ಬಂಗಾಳದ ಮೇಲಿನ ತನ್ನ ಹಕ್ಕನ್ನೆಲ್ಲ ಬಿಟ್ಟುಕೊಡಬೇಕಾಯಿತು.
೩. ಔದ್‌ನ ನವಾಬನಾದ ಷುಜ್-ಉದ್-ದೌಲನು ಕಂಪನಿಗೆ ಯುದ್ಧನಷ್ಟ ಪರಿಹಾರವಾಗಿ 50 ಲಕ್ಷ ರೂಪಾಯಿಗಳನ್ನು ಕೊಡಬೇಕಾಯಿತು.
೪. ಮೀರ್‌ಜಾಫರ್ ಮರಣ ಹೊಂದಿದ್ದರಿಂದ ಅವನ ಮಗನಿಗೆ ವಿಶ್ರಾಂತಿ ವೇತನ ನೀಡಿ ಬಂಗಾಳದ ಪೂರ್ಣ ಆಡಳಿತವನ್ನು ಕಂಪನಿಯು ನಿರ್ವಹಿಸತೊಡಗಿತು.

ಅಂತಿಮವಾಗಿ ಬಕ್ಸಾರ್ ಕದನವು ಬ್ರಿಟಿಷರು ಬಂಗಾಳ, ಬಿಹಾರ ಮತ್ತು ಒರಿಸ್ಸಾದ ನಿಜವಾದ ಒಡೆಯರೆಂದು ದೃಢೀಕರಿಸಿತು ಹಾಗೂ ಔದ್ ಕೂಡ ಅವರ ಅಧೀನದಲ್ಲಿ ಉಳಿಯುವಂತಾಯಿತು. 1765ರಲ್ಲಿ ರಾಬರ್ಟ್ ಕ್ಲೈವನು ಬಂಗಾಳದಲ್ಲಿ 'ದ್ವಿ ಸರ್ಕಾರ' ಪದ್ಧತಿಯನ್ನು ಜಾರಿಗೆ ತಂದನು. ಇದರ ಪ್ರಕಾರ ಕಂದಾಯ ವಸೂಲಾತಿ, ನಾಗರಿಕ ಮತ್ತು ಅಪರಾಧ ನ್ಯಾಯ ನಿರ್ವಹಣಾ ವ್ಯವಸ್ಥೆಯನ್ನು ಭಾರತೀಯ ಅಧಿಕಾರಿಗಳಿಗೆ ನೀಡಲಾಯಿತು. ವಸೂಲಾದ ಕಂದಾಯದ ನಿರ್ವಹಣಾ ಆಡಳಿತವನ್ನು ಬ್ರಿಟಿಷರು ತಮ್ಮ ಬಳಿಯೇ ಇಟ್ಟುಕೊಂಡರು. ಹೀಗೆ ಬ್ರಿಟಿಷರು ತಮ್ಮ ವಾಣಿಜ್ಯ ಹಿತಾಸಕ್ತಿಯನ್ನು ಕಾಪಾಡಿಕೊಳ್ಳುವ ಸಲುವಾಗಿ ಭಾರತದಲ್ಲಿ ರಾಜಕೀಯ ಪರಮಾಧಿಕಾರವನ್ನು ಸ್ಥಾಪಿಸಿದರು.

III. ಚಟುವಟಿಕೆ :

೧. ಬ್ರಿಟಿಷರು ಕಟ್ಟಿದ ಪ್ರೆಸಿಡೆನ್ಸಿ ನಗರಗಳನ್ನು ಕುರಿತು ಮಾಹಿತಿ ಸಂಗ್ರಹಿಸಿ.